158ನೇ ಮು ಟ SL NO1-46 ದಿ: 13-03-26

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಭಾರತಿ ಶೆಟ್ಟಿ ಇವರು ಪ್ರಸ್ತಾಪಿಸಿರುವ ಶೂನ್ಯವೇಳೆಯ ಸೂಚನೆಗೆ ಉತ್ತರ**

**ಪ್ರಶ್ನೆ**:

ಕೊರಟಗೆರೆ ಗ್ರಾಮವೊಂದರಲ್ಲಿ ಊರ ದೇವತೆ ದೇಗುಲ ಬಳಿ ಇರುವ ವಿದ್ಯಾರ್ಥಿನಿಯರ ಹಾಸ್ಟೆಲ್ ಮುಟ್ಟಾಗುವ ಯುವತಿ/ಮಹಿಳೆಯರು ಈ ದೇಗುಲ ಬಳಿ ಬರಬಾರದೆಂಬ ನಂಬಿಕೆಯಿಂದಾಗಿ ಸಮಸ್ಯೆ.

ಸರ್ಕಾರಗಳು ಗ್ರಾಮೀಣ ಭಾಗದ ಬಾಲಕೀಯರ ಶಿಕ್ಷಣಕ್ಕೆ ಅನುಕೂಲವಾಗಲೆಂದು ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ವಸತಿ ನಿಲಯವೊಂದು ಮೂಢ ನಂಬಿಕೆಯ ಕಾರಣಕ್ಕೆ 8 ವರ್ಷದಿಂದ ಪಾಳು ಬಿದ್ದಿದೆ. ತುಮಕೂರು ಜಿಲ್ಲೆ, ಕೊರಟಗೆರೆ, ತಾಲ್ಲೂಕಿನ ಹೊಳವನಹಳ್ಳಿ ಹೋಬಳಿಯ ಅಕ್ಕಿರಾಂಪುರ ಗ್ರಾಮದಲ್ಲಿ 8 ವರ್ಷಗಳ ಹಿಂದೆ ಜಿಲ್ಲಾ ಪಂಚಾಯಿತಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ರೂ. 69 ಲಕ್ಷ ವೆಚ್ಚದಲ್ಲಿ ಕಸ್ತೂರಿ ಬಾ ಗಾಂಧಿ ಬಾಲಿಕಾ ವಿದ್ಯಾರ್ಥಿನಿಲಯ ನಿರ್ಮಿಸಲಾಗಿತ್ತು, ಇದರಲ್ಲಿ ವಸತಿ ಕೊಠಡಿಗಳು, ಅಡುಗೆ ಕೋಣೆ, ಶೌಚಾಲಯ ಹಾಗೂ ಸೋಲಾರ್ ವ್ಯವಸ್ಥೆಯಂತಹ ಎಲ್ಲಾ ಮೂಲ ಸೌಕಾರ್ಯಗಳನ್ನು ಕಲ್ಪಿಸಲಾಗಿತ್ತು.

ಅಡ್ಡಿಯಾದ ಮೂಢ ನಂಬಿಕೆ : ವಿದ್ಯಾರ್ಥಿ ನಿಲಯದ ಸಮೀಪದಲ್ಲೇ ಗ್ರಾಮ ದೇವತೆ ಏಳುಮಂದೆಮ್ಮನ ದೇವಸ್ಥಾನವಿದೆ. ದೇವಿಯ ಪಾರಂಪರಿಕ ಕಟ್ಟುಪಾಡುಗಳ ಪ್ರಕಾರ, ಋತು ಸ್ರಾವವಾದ ಮಹಿಳೆಯರು ಅಥವಾ ಬಾಣಂತಿಯರು ಈ ಭಾಗದಲ್ಲಿ ಸಂಚರಿಸಬಾರದು ಎಂಬ ಬಲವಾದ ನಂಬಿಕೆ ಗ್ರಾಮಸ್ಥರಲ್ಲಿದೆ. ನಿಯಮ ಮೀರಿದರೆ ದೇವಿಯ ಮುನಿಸಿಗೆ ಗುರಿಯಾಗಿ ಅನಾಹುತಗಳು ಸಂಭವಿಸಬಹುದು ಎಂಬ ಭಯವಿದೆ. ಈ ಕಾರಣದಿಂದಾಗಿ ಹೆಣ್ಣು ಮಕ್ಕಳನ್ನು ಈ ವಸತಿ ನಿಲಯಕ್ಕೆ ಕಳುಹಿಸಲು ಪೋಷಕರು ಹಿಂದೇಟು ಹಾಕುತ್ತಿದ್ದಾರೆ. ಹಿಂದಿನ ಬಿ.ಇ.ಓ ಹಾಗೂ ಪ್ರಸಿದ್ಧ ವಿಚಾರವಾದಿ ಹುಲಿಕಲ್ ನಟರಾಜು ಗ್ರಾಮಕ್ಕೆ ಭೇಟಿ ನೀಡಿ, ಜನರಲ್ಲಿ ಜಾಗೃತಿ ಮೂಡಿಸಲು ಪ್ರಯತ್ನಿಸಿದ್ದರೂ ಜನರಲ್ಲಿ ಭಯ ದೂರವಾಗಿಲ್ಲ. ನಿಲಯ ಬಳಕೆಯಾಗದ ಕಾರಣ ಕಟ್ಟಡದ ಕಿಟಕಿ –ಬಾಗಿಲುಗಳು ಸಂಪೂರ್ಣ ಹಾಳಾಗಿದ್ದು, ಸೋಲಾರ್ ವ್ಯವಸ್ಥೆ ಕೂಡ ಹಾಳಾಗುತ್ತಿದೆ.

ಗ್ರಾಮದ ಮಧ್ಯಭಾಗದಲ್ಲಿರುವ ವಿದ್ಯಾರ್ಥಿ ನಿಲಯವನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರಿಸಿ, ಬಾಲಕಿಯರ ವಸತಿ ನಿಲಯವನ್ನು ಗ್ರಾಮದ ಒಳಗಿನ ಸುರಕ್ಷಿತ ಬದಲಾಯಿಸಿದರೆ, ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿದೆ ಎಂದು ಸ್ಥಳೀಯರು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಸರಕಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ತಮ್ಮ ಮೂಲಕ ಒತ್ತಾಯ ಮಾಡುತ್ತೇನೆ.

**ಉತ್ತರ:**

ಕೊರಟಗೆರೆ ತಾಲ್ಲೂಕಿನ ಅಕ್ಕಿರಾಂಪುರ ಗ್ರಾಮದಲ್ಲಿರುವ ಕರ್ನಾಟಕ ಕಸ್ತೂರ ಬಾ ಗಾಂಧಿಕ ಬಾಲಕಿಯರ ವಸತಿ ನಿಲಯದ ದಾಖಲಾತಿ 31.03.2021 ಕ್ಕೆ ಅಂತಿಮಗೊಂಡಿದ್ದು, ತದನಂತರ ಕೋವಿಡ್ ಹಾಗೂ ಇತರೆ ಕಾರಣಗಳಿಂದ ಇದುವರೆವಿಗೂ ಯಾವುದೇ ವಿದ್ಯಾರ್ಥಿನಿಯರು ದಾಖಲಾಗಿರುವುದಿಲ್ಲ. ಆದ್ದರಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. 2023-24 ನೇ ಸಾಲಿಗೆ ದಾಖಲಾತಿಗಾಗಿ ಪತ್ರಿಕೆ ಪ್ರಕಟಣೆಗಳನ್ನು ನೀಡಲಾಗಿತ್ತು. ಹೊಳವನಹಳ್ಳಿ ಹೋಬಳಿಯ ಎಲ್ಲಾ ಹಿರಿಯ ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ದಾಖಲಾತಿಗೆ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಗಿರುತ್ತದೆ.
2. ಕರಪತ್ರ ಹಾಗೂ ಬ್ಯಾನರ್ ಮಾಡಿಸಿ ವ್ಯಾಪಕ ಪ್ರಚಾರ ಮಾಡಿಸಲಾಗಿರುತ್ತದೆ.
3. ಹೋಬಳಿ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆಯಲ್ಲಿಯೂ ಬಾಲಕಿಯರ ದಾಖಲಾತಿಗೆ ಕ್ರಮವಹಿಸಲು ತಿಳಿಸಲಾಗಿರುತ್ತದೆ.
4. ಗ್ರಾಮ ಪಂಚಾಯಿತಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಸಹಯೋಗದಲ್ಲಿ ಹುಲಿಕಲ್ ನಟರಾಜು ರವರಿಂದ ಪವಾಡ ಬಯಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸದರಿ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಎಲ್ಲಾ ಅನುಷ್ಠಾನಾಧಿಕಾರಿಗಳು, ಹೊಳವನಹಳ್ಳಿ ಹೋಬಳಿ ಎಲ್ಲಾ ಹಿರಿಯ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳು ಶಿಕ್ಷಕರು ಎಸ್.ಡಿ.ಎಂ.ಸಿ ಮತ್ತು ಪೋಷಕರು 6 ರಿಂದ 10 ನೇ ತರಗತಿವರೆಗಿನ ಹೆಣ್ಣು ಮಕ್ಕಳು ಭಾಗವಹಿಸಿದರು, ಕಾರ್ಯಕ್ರಮದ ನಂತರ ವಸತಿ ನಿಲಯದ ಬಳಿ ಮಕ್ಕಳು ಶಿಕ್ಷಕರು ಸ್ಥಳ ಭೇಟಿ ಮಾಡಿ ದೇವರು ಮೂಢ ನಂಬಿಕೆ ಇತ್ಯಾದಿ ಕಾರಣಗಳು ಈ ವಸತಿ ನಿಲಯಕ್ಕೆ ಸಂಬಂಧವಿರುವುದಿಲ್ಲವೆಂದು ತಿಳಿಸಿರುತ್ತಾರೆ.
5. ಪ್ರಖ್ಯಾತ ವೈದ್ಯರಾದ ಡಾ.ಇಂದಿರಾ ಪ್ರಸಾದ್ ರವರು ಹೆಣ್ಣು ಮಕ್ಕಳ ಋತುಚಕ್ರ, ವೈಯಕ್ತಿಕ ಸ್ವಚ್ಛತೆ, ವೈಜ್ಞಾನಿಕ ಮನೋಭಾವನೆಗಳ ಕಾರಣಗಳ ಬಗ್ಗೆ ಪ್ರಾಯೋಗಿಕವಾಗಿ ತಿಳಿಸಿ ಕೊಟ್ಟಿರುತ್ತಾರೆ. ಈ ಕಾರ್ಯಕ್ರಮವನ್ನು ಪತ್ರಕರ್ತರು ಹಾಗೂ ಮಾಧ್ಯಮದ ಮೂಲಕ ಪ್ರಚಾರ ಮಾಡಲಾಗಿರುತ್ತದೆ

ಆದರೂ ಯಾವುದೇ ಪೋಷಕರು ದಾಖಲಾತಿ ಮಾಡಿಸಲು ಮುಂದೆ ಬಂದಿರುವುದಿಲ್ಲ.

6. ಸಮಾಜ ಕಲ್ಯಾಣಾಧಿಕಾರಿಗಳು ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ ಕೊರಟಗೆರೆ ಇವರಿಗೆ ಪತ್ರ ಬರೆದು ಅಕ್ಕಿರಾಂಪುರ ಗ್ರಾಮದಲ್ಲಿರುವ ಮೆಟ್ರಿಕ್ ಪೂರ್ವ ಗಂಡು ಮಕ್ಕಳ ವಸತಿ ನಿಲಯದ ಕಟ್ಟಡವನ್ನು ಪರಸ್ಪರ ಸ್ವಾಧೀನಾಂತರ ಮಾಡಿಕೊಡಲು ಮನವಿ ಮಾಡಲಾಗುವುದು.

7. ತಾಲ್ಲೂಕಿನ ಎಲ್ಲಾ ಹೋಬಳಿ ಮುಖ್ಯ ಶಿಕ್ಷಕರ ಸಭೆ ಕರೆದು ದಾಖಲಾತಿಗಾಗಿ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

8. ಎಲ್ಲಾ ಅನುಷ್ಠಾನಾಧಿಕಾರಿಗಳ ಮೂಲಕ ಕ್ಲಸ್ಟರ್ ಹಂತದ ಸಭೆಗಳನ್ನು ಪ್ರಚಾರ ಮಾಡಿರುತ್ತಾರೆ.

**ಸಂಖ್ಯೆ: ಇಪಿ 26 ಎಂಸಿಡಿ 2026**

(ಎಸ್. ಮಧುಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**